**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಕೆ.ಆರ್.ನಗರ.**

**ಸಿ.ಸಿ ನಂಃ 60/2020**

| | | |
|---|---|---|
| **ಸಾಕ್ಷಿಯ ಹೆಸರಃ** | **ರೇವಣ್ಣ** | **ಫ್ರಾಸಾಃ** 1 |
| **ತಂದೆಯ ಹೆಸರುಃ** | **ತಮ್ಮೇಗೌಡ** | **ಚಾಸಾಃ** 2 |
| **ವಯಸ್ಸುಃ** | 50 **ವರ್ಷ** | **ದಿಃ** 05.08.2025 |
| **ಉದ್ಯೋಗಃ** | **ವ್ಯವಸಾಯ** | **ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.** |
| **ವಾಸ ಸ್ಥಳಃ** | **ನಾಟನಹಳ್ಳಿ ಗ್ರಾಮ** | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನನಗೆ ಚಾಸಾ-1 ರವರ ಪರಿಚಯ ಇರುವುದಿಲ್ಲ. ಯಾವ ದಿನಾಂಕದಂದು ಎಲ್ಲಿ ಏನು ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಜಪ್ತಿ ಪಂಚನಾಮೆಯನ್ನು ಮಾಡಿರುವುದಿಲ್ಲ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ಇರುವುದಿಲ್ಲ. ಅವರನ್ನು ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡಿರುತ್ತೇನೆ.

**( ಈ ಹಂತದಲ್ಲಿ ಮಾನ್ಯ ಹಿ.ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು – ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ**

ದಿಃ 18.03.2019 ರಂದು ಸಂಜೆ 5.30 ಗಂಟೆಯಿಂದ 06.30 ಗಂಟೆಯವರೆಗೆ ಚಾಸಾಃ7 ರವರು ನನ್ನ ಮತ್ತು ಚಾಸಾಃ1 ರವರ ಸಮಕ್ಷಮದಲ್ಲಿ ಜಪ್ತಿ ಪಂಚನಾಮೆ ಮಾಡಿ

ಮದ್ಯಗಳನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಸಾಕ್ಷಿಗೆ ಈಗ ತೋರಿಸಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1 (ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮುಂದುವರೆದು ನಿಪಿ-1ರಲ್ಲಿ ತಾನು ಪೋಲಿಸರ ಹೇಳಿಕೆಯ ಮೇರೆಗೆ ಠಾಣೆಯಲ್ಲಿ ಸಹಿಯನ್ನು ಹಾಕಿರುತ್ತೇನೆ ಹಾಗೂ ನಿಪಿ-1ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಟಿ.ಜಿ.. ವಕೀಲರಿಂದಃ**

ಪಾಟೀ ಸವಾಲು ಃ ಇರುವುದಿಲ್ಲ.
ಮರುವಿಚಾರಣೆ ಃ ಇರುವುದಿಲ್ಲ.

**( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )**

**ಓ. ಹೇ. ಕೇ. ಸರಿ ಇದೆ.**

**ಜೆಎಂಎಫ್‌ಸಿ ನ್ಯಾಯಾಧೀಶರು,**
**ಕೆ.ಆರ್.ನಗರ.**